ಈ) ಸ್ಫೋಟಕಗೊಂಡ ಕಲ್ಲು ಲಿಂಗದಹಳ್ಳಿ ಗ್ರಾಮದ ಮನೆಗಳ ಮೇಲೆ ಬೀಳುತ್ತಿರುವುದು ಮತ್ತು ಸ್ಫೋಟಕಗೊಂಡ ಸಂದರ್ಭದಲ್ಲಿ ಲಿಂಗದಹಳ್ಳಿ ಗ್ರಾಮದಲ್ಲಿ ಬಿರುಕು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಉ) ಹಾಗಿದ್ದಲ್ಲಿ, ಗಣಿ ಕೈಗಾರಿಕೆ ತಡೆಯಲು ಸರ್ಕಾರ ಏನು ಕ್ರಮ ಕೈಗೊಂಡಿದೆ?

ಶ್ರೀ ವಿ. ಮುನಿಯಪ್ಪ (ಗಣಿ ಮತ್ತು ಭೂವಿಜ್ಞಾನ ಸಚಿವರು):

ಅ) ಅನುಮತಿ ನೀಡಲಾಗಿದೆ.

ಆ) ಲಿಂಗದಹಳ್ಳಿ ಗ್ರಾಮದ ಸರ್ವೆ ಸಂಖ್ಯೆ:17ರ ಒಟ್ಟು 5-10 ಎಕರೆಗಳಿಗೆ ಈ ಕೆಳಕಂಡ ಗುತ್ತಿಗೆಗಳನ್ನು ನೀಡಿದೆ:

ಕ್ರ.ಸಂ.	ಕಲ್ಲು ಗಣಿ ಗುತ್ತಿಗೆ ಸಂಖ್ಯೆ	ವಿಸ್ತೀರ್ಣ (ಎಕರೆಗಳಲ್ಲಿ)	ಗುತ್ತಿಗೆದಾರರು ಶ್ರೀ :
1.	320	2-00	ಕೆ.ಎನ್. ಸಿದ್ಧೇಶ್
2.	322	0-20	ವಿ.ಎನ್. ದಿನೇಶ್
3.	323	0-30	ಆರ್.ಜಿ. ತಿಲಕ
4.	324	2-00	ಎಂ.ಪಿ. ಸುರೇಶ್

ಕಲ್ಲು ಗಣಿ ಗುತ್ತಿಗೆ ಸಂಖ್ಯೆ: 320, 322 ಹಾಗೂ 323ಗಳನ್ನು ಮೆ: ಓರಿಯಂಟಲ್ ಎಕ್ಸ್‌ಪ್ಲೋರ್ಟ್‌ರವರಿಗೆ ವರ್ಗಾಯಿಸಲಾಗಿದೆ.

ಇ) ಪ್ರಸ್ತುತ ಸದರಿ ಮೂರು ಗುತ್ತಿಗೆಗಳಲ್ಲಿ ಒಟ್ಟು ವಿಸ್ತೀರ್ಣ 3-0 ಎಕರೆ ಪ್ರದೇಶದಲ್ಲಿ ಕೆಲಸ ನಿರ್ವಹಿಸಲಾಗುತ್ತಿದೆ. ಆದರೂ ಸದರಿ ಸ್ಥಳಗಳಲ್ಲಿ ಪೂಜಾ ಸ್ಥಳ ಇದೆ ಎಂಬ ಕುರುಹುಗಳು ಕಂಡು ಬಂದಿರುವುದಿಲ್ಲ.

ಈ) ಕಲ್ಲು ಗಣಿ ಗುತ್ತಿಗೆಯ ಸ್ಥಳಗಳು ಲಿಂಗದಹಳ್ಳಿ ಗ್ರಾಮದಿಂದ ಸುಮಾರು 550 ಮೀಟರ್ ದೂರದಲ್ಲಿದ್ದು, ಸದರಿ ಗುತ್ತಿಗೆದಾರರು ಸ್ಫೋಟಕಗಳನ್ನು ಬಳಸಿ ಗ್ರಾಮಸ್ಥರಿಗೆ ತೊಂದರೆ ಆಗಿರುವ ಬಗ್ಗೆ ದೂರುಗಳು ಬಂದಿದ್ದು, ಇದನ್ನು ತಡೆಯಲು ಕ್ರಮ ಕೈಗೊಳ್ಳಲಾಗಿದೆ.

ಉ) ಕಲ್ಲು ಗಣಿ ಗುತ್ತಿಗೆದಾರರಿಗೆ ಕಡಿಮೆ ಪ್ರಮಾಣದ ಸ್ಫೋಟಕಗಳನ್ನು ಉಪಯೋಗಿಸಲು ನಿರ್ದೇಶನ ನೀಡಿದೆ.

ಬಸವಕಲ್ಯಾಣದಲ್ಲಿ ಬಿ.ಸಿ.ಎಂ ಹಾಗೂ ಎಸ್‌ಸಿ : ಎಸ್‌ಟಿ ವಸತಿ ನಿಲಯಗಳ ಪ್ರಾರಂಭ

1325(1650) ಶ್ರೀ ಎಂ.ಜಿ. ಮುಳೆ (ಬಸವಕಲ್ಯಾಣ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

1) ಬಸವಕಲ್ಯಾಣ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಯಾವ ಯಾವ ಗ್ರಾಮಗಳಲ್ಲಿ ಬಿ.ಸಿ.ಎಂ ಮತ್ತು ಎಸ್‌ಸಿ : ಎಸ್‌ಟಿ ವಿದ್ಯಾರ್ಥಿ ವಸತಿ ನಿಲಯಗಳಿವೆ?

2) ಈ ಮತಕ್ಷೇತ್ರದಲ್ಲಿ ಮೇಲ್ಕಂಡ ವರ್ಗದ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿದ್ದು ಈ ಸಂಖ್ಯೆಗನುಗುಣವಾಗಿ ಇನ್ನೂ ಹೊಸದಾಗಿ ಬಿ.ಸಿ.ಎಂ ಮತ್ತು ಎಸ್‌ಸಿ : ಎಸ್‌ಟಿ ವಿದ್ಯಾರ್ಥಿ ವಸತಿ ನಿಲಯಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ?

3) ಇದ್ದಲ್ಲಿ, ಈ ಕ್ಷೇತ್ರದ ಯಾವ ಯಾವ ಗ್ರಾಮಗಳಲ್ಲಿ ಪ್ರಸಕ್ತ ಸಾಲಿನಲ್ಲಿ ಹೊಸ ಬಿ.ಸಿ.ಎಂ ಮತ್ತು ಎಸ್‌ಸಿ : ಎಸ್‌ಟಿ ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸಲು ಮಂಜೂರಾತಿ ನೀಡಲಾಗುವುದು?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು):

1) ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

2) ಆಯವ್ಯಯದಲ್ಲಿ ಅವಕಾಶ ಕಲ್ಪಿಸದಿರುವುದರಿಂದ ಯಾವುದೇ ಹೊಸ ವಿದ್ಯಾರ್ಥಿನಿಲಯವನ್ನು ಪ್ರಾರಂಭಿಸುವ ಪ್ರಸ್ತಾವನೆ ಇರುವುದಿಲ್ಲ.

3) ಉದ್ಭವಿಸುವುದಿಲ್ಲ.

ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ಎಂ.ಜಿ. ಮುಳೆ (ಬಸವಕಲ್ಯಾಣ) ಇವರ ಚುಕ್ಕೆ ಗುರ್ತಿಲ್ಲದ ಪ್ರಶ್ನೆ ಸಂಖ್ಯೆ: 1650ಕ್ಕೆ ಅನುಬಂಧ

ಕ್ರಮ ಸಂಖ್ಯೆ	ವಿದ್ಯಾರ್ಥಿನಿಲಯಗಳ ವಿವರ
ಅ)	ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯ
1)	ಮೆಟ್ರಿಕ್-ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಬಸವಕಲ್ಯಾಣ
2)	ಮೆಟ್ರಿಕ್-ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಹಾರಕೂಡ
3)	ಮೆಟ್ರಿಕ್-ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಗದಲಿಗಾಂ
4)	ಮೆಟ್ರಿಕ್-ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಹಿಪ್ಪರಗಾಬಾಗ
5)	ಮೆಟ್ರಿಕ್-ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಕಿಟ್ಟಾ
6)	ಮೆಟ್ರಿಕ್-ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಮಂಡಾಳ
7)	ಮೆಟ್ರಿಕ್-ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಕೋಹಿನೂರು
8)	ಮೆಟ್ರಿಕ್-ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ರಾಜೇಶ್ವರ
9)	ಮೆಟ್ರಿಕ್-ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಮುಡಬಿ
10)	ಮೆಟ್ರಿಕ್-ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಉಜಳಂ
11)	ಮೆಟ್ರಿಕ್-ನಂತರದ ಬಾಲಕರ ವಿದ್ಯಾರ್ಥಿನಿಲಯ, ಬಸವಕಲ್ಯಾಣ
12)	ಮೆಟ್ರಿಕ್-ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ಬಸವಕಲ್ಯಾಣ
ಆ)	ಅಲ್ಪಸಂಖ್ಯಾತರ ವಿದ್ಯಾರ್ಥಿನಿಲಯಗಳು ಮಂಜೂರಾಗಿರುವುದಿಲ್ಲ.
ಇ)	ಪರಿಶಿಷ್ಟ ಜಾತಿಯ ವಿದ್ಯಾರ್ಥಿನಿಲಯಗಳು
13)	ಮೆಟ್ರಿಕ್-ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಬಸವಕಲ್ಯಾಣ
14)	ಮೆಟ್ರಿಕ್-ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಮುಡಬಿ
15)	ಮೆಟ್ರಿಕ್-ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ರಾಜೇಶ್ವರ
16)	ಮೆಟ್ರಿಕ್-ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಯರಬಾಗ
17)	ಮೆಟ್ರಿಕ್-ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಬಸವಕಲ್ಯಾಣ
18)	ಮೆಟ್ರಿಕ್-ನಂತರದ ಬಾಲಕರ ವಿದ್ಯಾರ್ಥಿನಿಲಯ, ಬಸವಕಲ್ಯಾಣ
19)	ಮೆಟ್ರಿಕ್-ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ಬಸವಕಲ್ಯಾಣ
ಈ)	ಪರಿಶಿಷ್ಟ ವರ್ಗದ ವಿದ್ಯಾರ್ಥಿನಿಲಯ
20)	ಮೆಟ್ರಿಕ್-ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಮಂಟಾಳ ಗ್ರಾಮ

ಹುಣಸೂರು ತಾಲ್ಲೂಕಿನಲ್ಲಿ ಗಣಿಗಾರಿಕೆ

1327(1730) ಶ್ರೀ ಪಾಪಣ್ಣ ವಿ. (ಹುಣಸೂರು) : ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?